# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯಲ್ಲಿ ಗ್ರೇಟರ್ ಬೆಂಗಳೂರು ಆಡಳಿತ ಅಧಿನಿಯಮ, 2024ರ ಕಲಂ 241(7) ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾಗಿರುವ ಅಧಿಕಾರದನ್ವಯ, ಕೆಲವೊಂದು ವರ್ಗದ ನಿವೇಶನಗಳಲ್ಲಿ ನಿರ್ಮಿಸುವ ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣ ಪತ್ರ ಪಡೆಯುವುದರಿಂದ ವಿನಾಯಿತಿ ನೀಡುವ ಕುರಿತು.

**ಓದಲಾಗಿದೆ:**

1) ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ದಿನಾಂಕ: 03-07-2025.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ದಿನಾಂಕ: 11-07-2025.
3) ನಗರಾಭಿವೃದ್ಧಿ ಇಲಾಖೆಯ ಪತ್ರ ಸಂಖ್ಯೆ: ನಅಇ 334 ಎಂಎನ್‌ಯು 2025, ದಿನಾಂಕ: 14-07-2025.
4) ಮುಖ್ಯ ಆಯುಕ್ತರು, ಗ್ರೇಟರ್ ಬೆಂಗಳೂರು ಪ್ರಾಧಿಕಾರ ಇವರ ಸಂಖ್ಯೆ: ಮು.ಆ/ಪಿ.ಆರ್/(G)1016/2025-26, ದಿನಾಂಕ: 17-07-2025.
5) ನಗರಾಭಿವೃದ್ಧಿ ಇಲಾಖೆಯ ಅಧಿಸೂಚನೆ ಸಂಖ್ಯೆ: ನಅಇ 100 ಬಿಬಿಎಸ್ 2025(ಭಾಗ-2), ದಿನಾಂಕ: 11-05-2025.

* * * * *

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಂತೆ ಮಾನ್ಯ ಮುಖ್ಯ ಮಂತ್ರಿಯವರು ಅಧ್ಯಕ್ಷತೆ ಹಾಗೂ ಮಾನ್ಯ ಉಪ ಮುಖ್ಯಮಂತ್ರಿಯವರು ಮತ್ತು ಸಂಬಂಧಿಸಿದ ಇತರೆ ಮಾನ್ಯ ಸಚಿವರುಗಳ ಉಪಸ್ಥಿತಿಯಲ್ಲಿ ನಡೆದ ಸಭೆಯಲ್ಲಿ, ರಾಜ್ಯಾದ್ಯಂತ ಸ್ಥಳೀಯ ಸಂಸ್ಥೆಗಳ ಕಾರ್ಯನಿರ್ವಹಣೆಗೆ ಸಂಬಂಧಿಸಿದಂತೆ, ಅನ್ವಯವಾಗುವ ಎಲ್ಲಾ ಕಾಯ್ದೆಗಳಲ್ಲಿಯೂ ಕೆಲವೊಂದು ವರ್ಗದ ನಿವೇಶನಗಳಲ್ಲಿ ನಿರ್ಮಿಸುವ ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣ ಪತ್ರ ಪಡೆಯುವ ವಿಷಯಕ್ಕೆ ಸಂಬಂಧಿಸಿದಂತೆ, ಸಮಾನ ಅವಕಾಶಗಳಿರುವುದು ಸೂಕ್ತವೆಂದು ಅಭಿಪ್ರಾಯಿಸಿ, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆಯವರ ಅಧ್ಯಕ್ಷತೆಯಲ್ಲಿ ಸಭೆ ನಡೆಸಿ, ಸೂಕ್ತ ತೀರ್ಮಾನ ಕೈಗೊಳ್ಳುವಂತೆ ಸೂಚಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರನ್ವಯ, ಗ್ರೇಟರ್ ಬೆಂಗಳೂರು ಆಡಳಿತ ಅಧಿನಿಯಮ, 2024ರ ಕಲಂ 241(7), ಕರ್ನಾಟಕ ಮುನಿಸಿಪಲ್ ಕಾಯ್ದೆ, 1976 ಹಾಗೂ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಉಪಬಂಧಗಳನ್ವಯ, ಕೆಲವು ಕಟ್ಟಡಗಳಿಗೆ ಸ್ವಾಧೀನ ಪ್ರಮಾಣ ಪತ್ರ (Occupancy Certificate) ಗಳಿಂದ ವಿನಾಯಿತಿ ನೀಡುವ ಕುರಿತು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ, ನಗರಾಭಿವೃದ್ಧಿ ಇಲಾಖೆ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳಿಗೆ ಸಂಬಂಧಿಸಿದ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಕೆಲವು ಕ್ರಮಗಳನ್ನು ಕೈಗೊಳ್ಳಲು ತೀರ್ಮಾನ ಕೈಗೊಳ್ಳಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಪತ್ರದೊಂದಿಗೆ ಮೇಲ್ಕಂಡ ಸಭಾ ನಡವಳಿಯನ್ನು, ಮುಖ್ಯ ಆಯುಕ್ತರು, ಗ್ರೇಟರ್ ಬೆಂಗಳೂರು ಪ್ರಾಧಿಕಾರ ಇವರಿಗೆ ಕಳುಹಿಸಿ, ಪಾಲಿಕೆ ವ್ಯಾಪ್ತಿಯಲ್ಲಿ ಗ್ರೇಟರ್ ಬೆಂಗಳೂರು ಆಡಳಿತ ಕಾಯ್ದೆ, 2024ರ ಕಲಂ 241(7)ರಡಿಯಲ್ಲಿ 1200 ಚ.ಅಡಿ ವಿಸ್ತೀರ್ಣ ಮೀರದಂತಹ ನಿವೇಶನಗಳಲ್ಲಿ ನೆಲ+2 ಅಂತಸ್ತು ಅಥವಾ ಸ್ಟಿಲ್ಟ್+3 ಅಂತಸ್ತಿನವರೆಗಿನ ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣ ಪತ್ರ (occupancy certificate) ಪಡೆಯುವುದರಿಂದ ವಿನಾಯಿತಿ ನೀಡಲು ನಿಯಮಗಳನ್ನು ರಚಿಸಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವಂತೆ ಕೋರಲಾಗಿತ್ತು.

ಅದರಂತೆ, ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಪ್ರಸ್ತಾವನೆಯಲ್ಲಿ, ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವಲಯ ಕಚೇರಿಗಳಿಂದ ನಿವೇಶನಗಳಲ್ಲಿ ಕಟ್ಟಡ ನಿರ್ಮಾಣಕ್ಕೆ ನಕ್ಷೆ ಮಂಜೂರಾತಿ, ನೀಡಲಾಗುತ್ತಿದೆ. ಪ್ರತಿ ವರ್ಷ ಈ ರೀತಿ 1200 ಚ.ಅಡಿ ಗಿಂತ ಕಡಿಮೆ ವಿಸ್ತೀರ್ಣದ ನಿವೇಶನಗಳಲ್ಲಿ ಸುಮಾರು 4000 ಕಟ್ಟಡಗಳಿಗೆ ನಕ್ಷೆ ಮಂಜೂರಾತಿಯನ್ನು ನೀಡಲಾಗುತ್ತಿದೆ. ಕಟ್ಟಡ ನಕ್ಷೆ ಮಂಜೂರಾತಿಯನ್ನು ಕಳೆದ ಸಾಲಿನಿಂದ "ನಂಬಿಕೆ ನಕ್ಷೆ" ವ್ಯವಸ್ಥೆಯಡಿಯಲ್ಲಿ ಆಟೋಮೇಟೆಡ್ ಅನ್‌ಲೈನ್ ತಂತ್ರಾಂಶದ ಮೂಲಕ ನೀಡಲಾಗುತ್ತಿದ್ದು, ಈ ಯೋಜನೆಯಲ್ಲಿ ಅರ್ಜಿ ಸಲ್ಲಿಸಿದ ದಿನದಂದೇ ಕರಡು ನಕ್ಷೆ ಮತ್ತು 15 ದಿನಗಳೊಳಗಾಗಿ ಅಂತಿಮ ನಕ್ಷೆ ಮಂಜೂರಾತಿಗೆ ಅವಕಾಶ ಕಲ್ಪಿಸಿದ್ದು ಇದರಿಂದಾಗಿ ಸಾರ್ವಜನಿಕರಿಗೆ ಪಾರದರ್ಶಕವಾಗಿ ಹಾಗೂ ಕಾಲಮಿತಿಯೊಳಗೆ ನಕ್ಷೆ ಮಂಜೂರಾತಿಗಳನ್ನು ನೀಡಲಾಗುತ್ತಿದೆ.

ಮುಂದುವರೆದು. ಮೇಲೆ ಓದಲಾದ ಕ್ರಮ ಸಂಖ್ಯೆ (5)ರ ಅಧಿಸೂಚನೆಯನ್ವಯ, ಬಿಬಿಎಂಪಿ ವ್ಯಾಪ್ತಿಗೆ Greater Bengaluru Governance Act, 2024 ಚಾಲ್ತಿಯಲ್ಲಿದ್ದು, ಸದರಿ ಕಾಯ್ದೆಯಲ್ಲಿ ಕಲಂ 241(7) ರಡಿಯಲ್ಲಿ ಈ ಕೆಳಕಂಡಂತೆ ಅವಕಾಶ ಕಲ್ಪಿಸಲಾಗಿರುತ್ತದೆ.

> "The Government may notify the category of building which shall be exempted from obtaining occupancy certificate"

ಮೇಲ್ಕಂಡ ಕಾಯ್ದೆಯ ಅವಕಾಶ ಹಾಗೂ ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸಭಾ ನಡವಳಿಯಂತೆ ಸ್ವಾಧೀನಾನುಭವ ಪ್ರಮಾಣ ಪತ್ರ ನೀಡುವ ಪ್ರಕ್ರಿಯೆಯು ಸ್ಥಳ ಪರಿಶೀಲನೆ, ನಿರ್ಮಾಣ ಮಾಡಿರುವ ಕಟ್ಟಡ ಹಾಗೂ ಅನುಮೋದಿತ ಕಟ್ಟಡ ನಕ್ಷೆಯ ತುಲನಾತ್ಮಕ ಪರಿಶೀಲನೆ ಮುಂತಾದವುಗಳನ್ನು ಒಳಗೊಂಡಿರುವುದರಿಂದ, ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳಿಗೆ ಹೆಚ್ಚಿನ ಕೆಲಸದ ಹೊರೆ ಉಂಟಾಗುತ್ತಿದೆ. ಇದರಿಂದಾಗಿ ಸಾರ್ವಜನಿಕರಿಗೆ ಸೇವೆ ನೀಡುವಲ್ಲಿ ವಿಳಂಬವಾಗುವ ಸಾಧ್ಯತೆಗಳಿದ್ದು, ಸಾರ್ವಜನಿಕ ಅನುಕೂಲವನ್ನು ಗಮನದಲ್ಲಿರಿಸಿಕೊಂಡು ಹಾಗೂ 'ನಂಬಿಕೆ ನಕ್ಷೆ' ವ್ಯವಸ್ಥೆಯಲ್ಲಿ ಶೀಘ್ರವಾಗಿ ನಕ್ಷೆಗಳಿಗೆ ಮಂಜೂರಾತಿ ಮಾಡುತ್ತಿರುವುದನ್ನು ಗಮನದಲ್ಲಿರಿಸಿಕೊಂಡು, ಸಣ್ಣ ಪ್ರಮಾಣದ ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಪಡೆಯುವುದರಿಂದ ವಿನಾಯಿತಿ ನೀಡಲು ಪರಿಗಣಿಸುವುದು ಸೂಕ್ತವಾಗಿರುತ್ತದೆ ಎಂದು ಅಭಿಪ್ರಾಯ ತಿಳಿಸುತ್ತಾ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, -2024 ಕಲಂ 241(7)ರಡಿಯಲ್ಲಿ ಸರ್ಕಾರಕ್ಕಿರುವ ಅಧಿಕಾರದಂತೆ 1200 ಚ.ಅಡಿ ವಿಸ್ತೀರ್ಣದವರೆಗಿನ ನಿವೇಶನಗಳಲ್ಲಿ ನಕ್ಷೆ ಮಂಜೂರಾತಿ ಪಡೆದು ನಿರ್ಮಿಸುವ ನೆಲ+2 ಅಂತಸ್ತು ಅಥವಾ

ಸ್ಟಿಲ್ಟ್+3 ಅಂತಸ್ತಿನವರೆಗಿನ ವಾಸದ ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣ ಪತ್ರ (Occupancy certificate) ಪಡೆಯುವದರಿಂದ ವಿನಾಯಿತಿ ನೀಡಲು ಅಧಿಸೂಚನೆ ಹೊರಡಿಸುವಂತೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮುಖ್ಯ ಆಯುಕ್ತರು, ಗ್ರೇಟರ್ ಬೆಂಗಳೂರು ಪ್ರಾಧಿಕಾರ ರವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ ಸಣ್ಣ ಪ್ರಮಾಣದ ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣ ಪತ್ರ ಪಡೆಯಲು ಸಾರ್ವಜನಿಕರಿಗೆ ವಿನಾಯಿತಿ ನೀಡುವುದರಿಂದ, ಸಾರ್ವಜನಿಕರಿಗೆ ಸಕಾಲದಲ್ಲಿ ಸೇವೆ ಒದಗಿಸಲು ಸಹಕಾರಿಯಾದಂತಾಗುತ್ತದೆ ಎಂಬುದನ್ನು ಸರ್ಕಾರವು ಮನಗಂಡು ಈ ಕೆಳಗಿನಂತೆ ಆದೇಶ ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 334 ಎಂಎನ್‌ಯು 2025,**
**ಬೆಂಗಳೂರು, ದಿನಾಂಕ: 09-09-2025.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಈ ಕೆಳಕಂಡಂತೆ ಆದೇಶಿಸಿದೆ.

1) ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯಲ್ಲಿ ಗ್ರೇಟರ್ ಬೆಂಗಳೂರು ಆಡಳಿತ ಅಧಿನಿಯಮ, 2024ರ ಕಲಂ 241(7)ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾಗಿರುವ ಅಧಿಕಾರದನ್ವಯ, 1200 ಚ.ಅಡಿ ವಿಸ್ತೀರ್ಣದವರೆಗಿನ ನಿವೇಶನಗಳಲ್ಲಿ, ನಕ್ಷೆ ಮಂಜೂರಾತಿ ಪಡೆದು ನಿರ್ಮಿಸುವ ನೆಲ + 2 ಅಂತಸ್ತು ಅಥವಾ Stilt + 3 ಅಂತಸ್ತಿನವರೆಗಿನ ವಾಸದ ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣ ಪತ್ರ (occupancy certificate) ಪಡೆಯುವುದರಿಂದ ವಿನಾಯಿತಿ ನೀಡಿ ಆದೇಶಿಸಿದೆ.
2) ಗ್ರೇಟರ್ ಬೆಂಗಳೂರು ಆಡಳಿತ ಅಧಿನಿಯಮ, 2024ರ ಅಧ್ಯಾಯ 7ರ ನಿಬಂಧನೆಗಳನ್ವಯ ಕಟ್ಟಡ ಮತ್ತು ನಗರ ಯೋಜನಾ ನಿಯಮಗಳ ನಿಯಂತ್ರಣ ಮತ್ತು ಮೇಲ್ವಿಚಾರಣೆಗಳನ್ನು ಕಾರ್ಯಗತಗೊಳಿಸಲು ಲಭ್ಯವಿರುವ ಕಾರ್ಯಪಡೆಯೊಂದಿಗೆ ದೃಢವಾದ ಆಡಳಿತ ರಚನೆಯನ್ನು ವಿನ್ಯಾಸಗೊಳಿಸುವಂತೆ ಮುಖ್ಯ ಆಯುಕ್ತರು, ಗ್ರೇಟರ್ ಬೆಂಗಳೂರು ಪ್ರಾಧಿಕಾರರವರಿಗೆ ನಿರ್ದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಲಕ್ಷ್ಮೀಸಾಗರ್ ಎನ್.ಕೆ.)**
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಜಿ.ಬಿ.ಎ & ಬೆಂ.ನ.ಪಾ-1)

**ಇವರಿಗೆ:**
1) ಮಹಾಲೇಖಪಾಲರು (A&E) ಕರ್ನಾಟಕ ಸರ್ಕಾರ, ಬೆಂಗಳೂರು.
2) ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಡಾ|| ಬಿ.ಆರ್.ಅಂಬೇಡ್ಕರ್ ವೀದಿ,ಬೆಂಗಳೂರು.

3) ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಡಾ|| ಬಿ.ಆರ್. ಅಂಬೇಡ್ಕರ್ ವೀದಿ,ಬೆಂಗಳೂರು.
4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಡಾ|| ಬಿ.ಆರ್. ಅಂಬೇಡ್ಕರ್ ವೀದಿ,ಬೆಂಗಳೂರು.
5) ಮುಖ್ಯ ಆಯುಕ್ತರು, ಗ್ರೇಟರ್ ಬೆಂಗಳೂರು ಪ್ರಾಧಿಕಾರ, ಬೆಂಗಳೂರು.
6) ಸರ್ಕಾರದ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಡಾ|| ಬಿ.ಆರ್. ಅಂಬೇಡ್ಕರ್ ವೀದಿ,ಬೆಂಗಳೂರು.
7) ಮಾನ್ಯ ಉಪ ಮುಖ್ಯಮಂತ್ರಿಯವರ ಕಾರ್ಯದರ್ಶಿ, ವಿಕಾಸಸೌಧ, ಡಾ|| ಬಿ.ಆರ್. ಅಂಬೇಡ್ಕರ್ ವೀದಿ,ಬೆಂಗಳೂರು.
8) ಆಯುಕ್ತರುಗಳು (ಬೆಂಗಳೂರು ಕೇಂದ್ರ ; ಉತ್ತರ ; ದಕ್ಷಿಣ ; ಪೂರ್ವ ; ಪಶ್ಚಿಮ ನಗರ ಪಾಲಿಕೆಗಳು), ಗ್ರೇಟರ್ ಬೆಂಗಳೂರು ಪ್ರಾಧಿಕಾರ, ಬೆಂಗಳೂರು.
9) ಮಾನ್ಯ ಉಪ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಡಾ|| ಬಿ.ಆರ್. ಅಂಬೇಡ್ಕರ್ ವೀದಿ,ಬೆಂಗಳೂರು.
10) ವಿಶೇಷ ಆಯುಕ್ತರು (ಆಡಳಿತ), ಗ್ರೇಟರ್ ಬೆಂಗಳೂರು ಪ್ರಾಧಿಕಾರ, ಬೆಂಗಳೂರು.
11) ಸರ್ಕಾರದ ಅಪರ ಕಾರ್ಯದರ್ಶಿ, ಸಚಿವ ಸಂಪುಟ, ವಿಧಾನಸೌಧ, ಬೆಂಗಳೂರು. (ಪ್ರಕರಣ ಸಂಖ್ಯೆ: ಸಿ: 657/2025, ದಿನಾಂಕ: 04-09-2025).
12) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು.
13) ಸರ್ಕಾರದ ವಿಶೇಷ ಕಾರ್ಯದರ್ಶಿಯವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು.
14) ಶಾಖಾ ರಕ್ಷಾ, ಕಡತ/ಹೆಚ್ಚುವರಿ ಪ್ರತಿಗಳು.